# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: **M/s** Gothe Renewable Energy Private Limited ಕಂಪನಿಗೆ ಬಾಗಲಕೋಟೆ ಜಿಲ್ಲೆ, ಜಮಖಂಡಿ ತಾಲ್ಲೂಕಿನ ಗೋತೆ ಮತ್ತು ಕಾಜಿಬೆಳಗಿ ಗ್ರಾಮಗಳಲ್ಲಿ 40 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡುವ ಬಗ್ಗೆ.

ಓದಲಾಗಿದೆ: 1 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು ಇವರ ಏಕ ಕಡತ ಸಂಖ್ಯೆ: **KREDL/08/GREPL-40** MW /Gothe/Bagalkot/2017/G-1449

2 ದಿನಾಂಕ: 16.02.2017 ರಂದು ನಡೆದ ಹಂಚಿಕೆ ಸಮಿತಿ ಸಭೆಯ ನಡವಳಿಗಳು.

ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ★ ಬೆಂಗಳೂರು ★
ಸಂ. 1293
ದಿನಾಂಕ 4/4/17

* * *

ಪ್ರಸ್ತಾವನೆ :-

M/s **Gothe** Renewable Energy Private Limited **ಕಂಪನಿಗೆ** ಬಾಗಲಕೋಟೆ ಜಿಲ್ಲೆ, ಜಮಖಂಡಿ ತಾಲ್ಲೂಕಿನ ಗೋತೆ ಮತ್ತು ಕಾಜಿಬೆಳಗಿ ಗ್ರಾಮಗಳಲ್ಲಿ **40** ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಹಂಚಿಕೆ ಕೋರಿ ಸಲ್ಲಿಸಿರುವ ಪ್ರಸ್ತಾವನೆಯನ್ನು ಪರಿಶೀಲಿಸಿ, ಇದನ್ನು ಹಂಚಿಕೆ ಸಮಿತಿ ಸಭೆಯ ಮುಂದೆ ಮಂಡಿಸುವ ಸಲುವಾಗಿ ಯೋಜನೆಗೆ ಸಂಬಂಧಿಸಿದ ತಾಂತ್ರಿಕ ವಿವರಗಳು, ಸ್ಥಳದ ಮಾಹಿತಿ, ಅಕ್ಷಾಂಶ ಮತ್ತು ರೇಖಾಂಶ ಹಾಗೂ ಇನ್ನಿತರೆ ವಿವರಗಳೊಂದಿಗೆ ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಇ.ಡಿ.ಎಲ್. ರವರು ಮೇಲೆ ಓದಲಾದ ಕ್ರಮ ಸಂಖ್ಯೆ (1) ರನ್ವಯ ಏಕ ಕಡತ ಪದ್ಧತಿಯಡಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಮೇಲೆ ಓದಲಾದ ಕ್ರಮ ಸಂಖ್ಯೆ (2) ರನ್ವಯ ದಿನಾಂಕ :16.02.2017 ರಂದು ನಡೆದ **ಹಂಚಿಕೆ** ಸಮಿತಿ ಸಭೆಯ ಮುಂದೆ ಮಂಡಿಸಲಾಗಿತ್ತು. ಸಮಿತಿಯು ಪ್ರಸ್ತಾವನೆಯನ್ನು ಕೂಲಂಕಷವಾಗಿ **ಪರಿಶೀಲಿಸಿ**, M/s Gothe Renewable Energy Private Limited ಕಂಪನಿಗೆ ಬಾಗಲಕೋಟೆ ಜಿಲ್ಲೆ, ಜಮಖಂಡಿ ತಾಲ್ಲೂಕಿನ ಗೋತೆ ಮತ್ತು ಕಾಜಿಬೆಳಗಿ ಗ್ರಾಮಗಳಲ್ಲಿ 40 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗೆ ಸಂಬಂಧಿಸಿದಂತೆ ವಿಸ್ತೃತ ಯೋಜನಾ ವರದಿಯನ್ನು ತಯಾರಿಸಿ ಕೆ.ಆರ್.ಇ.ಡಿ.ಎಲ್. ಸಂಸ್ಥೆಗೆ ಸಲ್ಲಿಸಿರುವುದರಿಂದ, ಸದರಿ ಕಂಪನಿಗೆ 40 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಲು ಸಮಿತಿಯು ಸರ್ವಾನುಮತದಿಂದ ಶಿಫಾರಸ್ಸು ಮಾಡಿರುತ್ತದೆ.

ಸದರಿ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ : ಇಎನ್ 85 ಎನ್‌ಸಿಇ 2017,**
**ಬೆಂಗಳೂರು, ದಿನಾಂಕ : 01.04.2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು, M/s Gothe Renewable Energy Private Limited ಕಂಪನಿಗೆ ಬಾಗಲಕೋಟೆ ಜಿಲ್ಲೆ, ಜಮಖಂಡಿ ತಾಲ್ಲೂಕಿನ ಗೋತೆ ಮತ್ತು ಕಾಜಿಬೆಳಗಿ ಗ್ರಾಮಗಳಲ್ಲಿ 40 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಈ ಕೆಳಗಿನ ಶೆಡ್ಯೂಲ್‌ನಲ್ಲಿ ವಿವರಿಸಿರುವಂತೆ ಹಾಗೂ ಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು ಹಂಚಿಕೆ ಮಾಡಿ ಆದೇಶಿಸಲಾಗಿದೆ.

Wind Section
Ward No. 1722
Date: 5/4/17
Sig.........

GM (Tech) I/C KREDL

...2

**Schedule**

**Geographical area description for 40 MW capacity wind power project**

| Toposheet No. | Proposed capacity in MW | Near by villages of the proposed area and district. | Geographical area description of the project |
|---|---|---|---|
| 47 P/5 & 47 P/6 | 40 MW<br>(20 Nos x 2000 kW) | Gothe and Kajibilagi, Jamkhandi Taluk, Bagalkot district. | The proposed area is near Honawad. The area Surrounded by Part-A (Point- A-B-C-D-A) and Part- B (Point–P-Q-R-S-P) and area is held in the following Geographical co-ordinates as:<br>**PART-A**<br>Point A: Lat: 16°44'55.68''N - Long: 75°24'12.96''E<br>Point B: Lat: 16°47'8.88'' N - Long:75°24'9.72'' E<br>Point C: Lat: 16°45'23.76'' N - Long: 75°27'36'' E<br>Point D: Lat: 16°44'54.96'' N - Long: 75°27'34.56'' E<br>**PART-B**<br>Point P: Lat: 16°43'53.4'' N - Long: 75°23'34.8'' E<br>Point Q: Lat: 16°44'47.76'' N - Long:75°23'8.16'' E<br>Point R: Lat: 16°44'48.84'' N - Long: 75°27'34.92'' E<br>Point S: Lat: 16°43'52.32'' N - Long: 75°27'32.76'' E<br>Peaks: 660, 666, 682, 551, 651 & 640 m AMSL |

ಷರತ್ತುಗಳು:-

1. ಈ ಆದೇಶ ಹೊರಡಿಸಿದ ದಿನಾಂಕದಿಂದ 45 ದಿನಗಳ ಒಳಗಾಗಿ ಸರ್ಕಾರದ ಆದೇಶ ಸಂಖ್ಯೆ : ಇಎನ್ 435 ಎನ್‌ಸಿಇ 2011, ದಿನಾಂಕ :06.1.2012 ರನ್ವಯ ಅಭಿವೃದ್ಧಿದಾರರು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.
2. ಅಭಿವೃದ್ಧಿದಾರರು ಈ ಯೋಜನೆಯನ್ನು ಸರ್ಕಾರದ ಆದೇಶ ಸಂಖ್ಯೆ: ಇಎನ್ 354 ಎನ್‌ಸಿಇ 2008 ದಿನಾಂಕ: 19.01.2010 ಹಾಗೂ ತಿದ್ದುಪಡಿ ಆದೇಶ ಸಂಖ್ಯೆ: ಇಎನ್ 07 ಎನ್‌ಸಿಇ 2011, ದಿನಾಂಕ: 18.07.2011 ರಲ್ಲಿ ನಿಗದಿಪಡಿರುವ ಅವಧಿಯೊಳಗಾಗಿ ಅನುಷ್ಠಾನಗೊಳಿಸತಕ್ಕದ್ದು.
3. ಅಭಿವೃದ್ಧಿದಾರರು ತಾಂತ್ರಿಕ ಅವಶ್ಯಕತೆ ಮತ್ತು ಹೆಚ್ಚಿನ ವಿದ್ಯುತ್ ಉತ್ಪಾದನೆಯನ್ನು ಸೇಫ್‌ನಕ್ಷೆ ಮತ್ತು ವಿಂಡ್ ಫಾರ್ಮನ ಲೇಔಟ್‌ನ ಬದಲಾವಣೆಗನುಗುಣವಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ಶಿಫಾರಸ್ಸಿನಂತೆ ಇದೆ ಎಂಬುದನ್ನು ಖಾತರಿ ಪಡಿಸಬೇಕು
4. ಯೋಜನೆಯ ವಿವಿಧ ಹಂತದ ಚಟುವಟಿಕೆಗಳು ಹಾಗೂ ಯೋಜನೆಗಳಿಂದ ಪ್ರಾರಂಭದ ಹಂತದ ತನಕ ವಿವಿಧ ಮೈಲುಗಲ್ಲುಗಳನ್ನು ತೋರಿಸುವ ಪರ್ಟ್ ನಕ್ಷೆಯನ್ನು ತಯಾರಿಸಿ ಮೇಲುಸ್ತುವಾರಿಗಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸಬೇಕು.
5. ಎಲ್ಲೆಲ್ಲಿ ಶಾಸನಬದ್ಧ ಅನುಮೋದನೆ ಅವಶ್ಯಕತೆಯಿದೆಯೋ ಅಂದರೆ ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ / ಕಂದಾಯ ಇಲಾಖೆಗಳ ಮತ್ತು ಇತರ ಸಂಬಂಧಿತ ಇಲಾಖೆಗಳಿಂದ ಅನುಮೋದನೆಯನ್ನು ಹಂಚಿಕೆದಾರರು ಪಡೆದುಕೊಳ್ಳತಕ್ಕದ್ದು. ಅಭಿವೃದ್ಧಿದಾರರು ಈ ಯೋಜನೆಯನ್ನು ಖಾಸಗಿ ಜಮೀನಿನಲ್ಲಿ ಕೈಗೊಳ್ಳುತ್ತಿರುವುದರಿಂದ, ಖಾಸಗಿ ಜಮೀನಿನ ಮಾಲೀಕರಿಂದ ಒಪ್ಪಿಗೆ ಪತ್ರವನ್ನು ಪಡೆಯತಕ್ಕದ್ದು.

...3